## 1 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.ನ್ಯಾಯಾಲಯ, ಮುಳಬಾಗಿಲು

**ಸಿಸಿ. ನಂಬರ್ 572/2015**

ಫ್ರಾ.ಸಾಃ 3

ಚಾಸಾಃ 7

**ದಿನಾಂಕಃ09.07.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರು | : ಡಾ. ಸುಧಾಕರ್ |
| ತಂದೆಯ ಹೆಸರು | : ಎ. ವೆಂಕಟೇಶ್ |
| ವಯಸ್ಸು | : 42 ವರ್ಷ |
| ಕೆಲಸ | : ವೈದ್ಯರು |
| ವಾಸ ಸ್ಥಳ | : ಬಂಗಾರಪೇಟೆ |

**ಮುಖ್ಯ ವಿಚಾರಣೆಃ ಮಾನ್ಯ ಸ. ಸ. ಅ. ರವರಿಂದಃ**

2007 ರಿಂದ 2018 ರವರೆಗೆ ನಂಗಲಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯಾದಿಸಿಕಾರಿಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ **14.06.2014** ರಂದು ಚಾಸಾ 1 ರವರು ಹಲ್ಲೆಯ ಹಿನ್ನಲೆಯಲ್ಲಿ ಆಸ್ಪತ್ರೆಗೆ ಬಂದಿದ್ದು ಅವರನ್ನು ಪರೀಕ್ಷಿಸಲಾಗಿ ಈ ಕೆಳಕಂಡ ಗಾಯಗಳು ಕಂಡು ಬಂದಿರುತ್ತವೆ.

1. ತಲೆಯ ಮೇಲೆ **7.6 X1.2** ಸೆಂಮೀ ಅಳತೆಯ ಹರಿತವಾದ ಮೂಳೆ ಕಾಣುವ ಗಾಯ

2. ಎಡ ಮುಂಗೈ ಮೇಲೆ **4X3** ಸೆಂಮೀ ಅಳತೆಯ ಊತದ ಗಾಯ

3. ಬಲತೊಡೆಯ ಮೇಲೆ ಊತದ ಗಾಯವಾಗಿದ್ದು, ನೋವಿನಿಂದ ಕೂಡಿತ್ತು

4. ಎಡಭಾಗದ ಎದೆಯ ಮೇಲೆ ಊತದ ಗಾಯ

ಮೇಲೆ ಹೇಳಿದ ಎಲ್ಲಾ ಗಾಯಗಳು ಸಾಮಾನ್ಯ ಸ್ವರೂಪದ ಗಾಯಗಳಾಗಿರುತ್ತವೆ. ಈ ಕುರಿತು ಗಾಯದ ಪ್ರಮಾಣ ಪತ್ರ ನೀಡಿರುತ್ತೇನೆ. ಸದರಿ ಗಾಯದ ಪ್ರಮಾಣ ಪತ್ರವನ್ನು ಸಾಕ್ಷಿ ಗುರುತಿಸಿದ ಮೇರೆಗೆ ಅದನ್ನು ನಿಪಿ2 ಎಂದು ಸಾಕ್ಷಿಯ ಸಹಿಯನ್ನು ನಿಪಿ2(ಎ) ಎಂದು ಗುರುತಿಸಲಾಯಿತು.

ನಿಪಿ 2 ರಲ್ಲಿ ನಮೂದಿಸಿರುವ ಗಾಯಗಳು ಕೋಲಿನಿಂದ ಹೊಡೆದಾಗ ಮತ್ತು ಕೈ, ಕಾಲುಗಳಿಂದ ಹೊಡೆದಾಗ ಆಗುವ ಸಾಧ್ಯತೆ ಇದೆ  ಎಂದರೆ ಸರಿ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಸಿವಿ ಆರ್  ವಕೀಲರಿಂದಃ ಇಲ್ಲ**

ಸಾಮಾನ್ಯವಾಗಿ ಒಬ್ಬ ವ್ಯಕ್ತಿ ಹಸುವನ್ನು ಹಿಡಿದುಕೊಂಡು ಹೋಗುವಾಗ ಅದು ಎಳೆದಾಗ ಹರಿತವಾದ ಜೆಲ್ಲಿ ಕಲ್ಲಿನ ಮೇಲೆ ಬಿದ್ದಾಗ ಆಗುವ ಸಾಧ್ಯತೆ ಇದೆ ಎಂದರೆ ಸಾಕ್ಷಿಯು ಆಗುವ ಸಾಧ್ಯತೆ ಕಡಿಮೆ ಇದೆ ಎಂದು ನುಡಿದಿರುತ್ತಾರೆ.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ. ಸ. ಇದೆ

ಸಹಿ/-

(ಶ್ರೀಮತಿ ರೋಹಿಣಿ. ಡಿ)

1 ನೇ ಅಪರ ಸಿ.ಜೆ ಮತ್ತು ಜೆಎಂಎಫ್ ಸಿ

ಮುಳಬಾಗಿಲು

<u>**1 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.ನ್ಯಾಯಾಲಯ, ಮುಳಬಾಗಿಲು**</u>

**ಸಿಸಿ. ನಂಬರ್ 572/2015**

ಫ್ರಾ.ಸಾಃ **4**

ಚಾಸಾಃ **8**

**ದಿನಾಂಕಃ09.07.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು**.

| | |
|---|---|
| ಹೆಸರು | : ಶ್ರೀ ಈಶ್ವರಪ್ಪ |
| ತಂದೆಯ ಹೆಸರು | : ಲೇಟ್ ವೆಂಕಟೇಶಪ್ಪ |
| ವಯಸ್ಸು | : 63 ವರ್ಷ |
| ಕೆಲಸ | : ನಿವೃತ್ತ ಪಿಎಎಸ್ಐ |
| ವಾಸ ಸ್ಥಳ | : ಕಾಮದೇನಹಳ್ಳಿ ಗ್ರಾಮ |

<u>**ಮುಖ್ಯ ವಿಚಾರಣೆಃ ಮಾನ್ಯ ಸ. ಸ. ಅ. ರವರಿಂದಃ**</u>

ದಿಃ 05.08.2013 ರಿಂದ ದಿಃ 10.09.2015 ರವರೆಗೆ ನಂಗಲಿ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯನಿರ್ವಹಿಸಿರುತ್ತೇನೆ.

ದಿಃ 15.06.2014 ರಂದು ಮದ್ಯಾಹ್ನ 12.00 ಗಂಟೆ ಸಮಯದಲ್ಲಿ ಠಾಣಾ ಪ್ರಭಾರದಲ್ಲಿದ್ದಾಗ ಚಾಸಾ 1 ರವರು ಠಾಣೆಗೆ ಹಾಜರಾಗಿದ ನೀಡಿದ ಲಿಖಿತ ದೂರನ್ನು ಪಡೆದು ಠಾಣಾ ಮೊ. ಸಂಖ್ಯೇ 71/2014 ರಂತೆ ಪ್ರಕರಣ ದಾಖಲಿಸಿ ಪ್ರ,ವ.ವರದಿಯನ್ನು ತಯಾರಿಸಿ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸದರಿ ದೂರನ್ನು ಮತ್ತು ಪ್ರ.ವ.ವರದಿಯನ್ನು ಸಾಕ್ಷಿ ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ 3 ಮತ್ತು 4 ಎಂದು ಸಾಕ್ಷಿಯ ಸಹಿಗಳನ್ನು ನಿಪಿ3(ಎ) ಮತ್ತು ನಿಪಿ 4(ಎ) ಎಂದು ಗುರುತಿಸಲಾಯಿತು.

ಅದೇ ದಿನ ಮದ್ಯಾಹ್ನ 12.30 ರಿಂದ 1.30 ರವರೆಗೆ ಕೃತ್ಯ ನಡೆದ ಸ್ಥಳಕ್ಕೆ ಬೇಟಿ ನೀಡಿದ್ದು, ಸ್ಥ.ಳದಲ್ಲಿ ಚಾಸಾ 2 ರವರು ಹಾಜರಿದ್ದು, ಘಟನಾ ಸ್ಥಳವನ್ನು ತೋರಿಸಿದ ಮೇರೆಗೆ ಚಾಸಾ 3 ಮತ್ತು 5 ರವರನ್ನು ಪಂಚರಾಗಿ ಬರಮಾಡಿಕೊಂಡು ಅವರ ಸಮಕ್ಷಮ ಮಹಜರ್ ಮಾಡಿ ಚಾಸಾ 2

ರವರು ಹಾಜರುಪಡಿಸಿದ ಕೋಲನ್ನು ಅಮಾನತ್ತುಪಡಿಸಿಕೊಂಡಿರುತ್ತೇನೆ. ವಶಪಡಿಸಿಕೊಂಡ ಮಾಲನ್ನು ಮಾಲುಪಟ್ಟಿ ಸಂಖ್ಯೆ 21/2014 ರಲ್ಲಿ ಅಳವಡಿಸಿ ನ್ಯಾಯಾಲಯಕ್ಕೆ ನಿವೇದಿಸಿಕೊಂರುತ್ತೇನೆ. ಸದರಿ ಮಹಜರ್ ಅನ್ನು ನಿಪಿ 5 ಎಂದು ಸಾಕ್ಷಿಯ ಸಹಿಯನ್ನು ನಿಪಿ 5(ಎ) ಎಂದು ಗುರುತಿಸಲಾಯಿತು.

ಅದೇ ದಿನ ಚಾಸಾ 2 ರಿಂದ 4 ರವರನ್ನು ವಿಚಾರಣೆ ಮಾಡಿ ಹೇಳಿಕೆ ಪಡೆದಿರುತ್ತೇನೆ. ನಂತರ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ 9 ರವರಿಗೆ ಹಸ್ತಾಂತರಿಸಿರುತ್ತೇನೆ. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಕೋಲನ್ನು ನೋಡಿ ಗುರುತಿಸಿದ್ದು, ಅದನ್ನು ಮು.ಮಾಲು 1 ಎಂದು ಗುರುತಿಸಲಾಗಿರುತ್ತದೆ.

**<u>ಪಾಟೀ ಸವಾಲುಃ ಆರೋಪಿ ತರ ಪರ ಶ್ರೀ ಸಿವಿ ಆರ್ ವಕೀಲರಿಂದಃ</u>**

ನಿಪಿ3 ರಲ್ಲಿ ಘಟನೆಯ ದಿಃ 13.06.2014 ರಂದು ನಡೆದಿರುವುದಾಗಿ ನಮೂದಾಗಿರುತ್ತದೆ ಎಂದರೆ ಸರಿ. ದೂರು ನೀಡಲು ಎರಡು ದಿನಗಳು ವಿಳಂಬ ಆಗಿದ್ದು, ಸದರಿ ವಿಳಂಬಕ್ಕೆ ನಿಪಿ3 ರಲ್ಲಿ ಕಾರಣ ನೀಡಿರುವುದಿಲ್ಲ. ಸರ್ವೆ ನಂಬರ್ 50/3 ಕ್ಕೆ ಸಂಬಂಧಿಸಿದ ಪಹಣಿಯನ್ನು ಹಾಜರುಪಡಿಸಿಲ್ಲ. ಘಟನಾ ಸ್ಥಳಕ್ಕೆ ಬೇಟಿ ನೀಡಿಲ್ಲ, ಯಾವುದೇ ಸ್ವತ್ತನ್ನು ವಶಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಠಾಣಯಲ್ಲಿ ನಿಪಿ 3 ಮತ್ತು 5 ರ ದಾಖಲೆಗಳನ್ನು ತಯಾಸಿರುತ್ತೇನೆ ಎಂದರೆ ಸರಿಯಲ್ಲ. ಯಾವುದೇ ಸಾಕ್ಷಿದಾರರ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ಫಿರ್ಯಾದುದಾರರಿಗೆ ಸಹಾಯ ಮಾಡಲು ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ. ಸ. ಇದೆ

ಸಹಿ/-
(ಶ್ರೀಮತಿ ರೋಹಿಣಿ. ಡಿ)
1 ನೇ ಅಪರ ಸಿ.ಜೆ ಮತ್ತು ಜೆಎಂಎಫ್ ಸಿ
ಮುಳಬಾಗಿಲು